ಸುಳ್ಳು ಹೇಳಲು ನಿರ್ಮಲಾಗೆ ನಾಚಿಕೆ ಆಗುವುದಿಲ್ಲವೇ?

ಅಪಾಯದಲ್ಲಿ ಪ್ರಜಾಪ್ರಭುತ್ವ, ಒಕ್ಕೂಟ ವ್ಯವಸ್ಥೆ

ತುಮಕೂರು: 'ರಾಜ್ಯಕ್ಕೆ ನೀಡಬೇಕಿರುವ ಎಲ್ಲ ಬಾಕಿ ಹಣವನ್ನು ಕೊಡಲಾಗಿದೆ. ಯಾವುದೇ ಬಾಕಿ ಉಳಿಸಿಕೊಂಡಿಲ್ಲ' ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸಮರ್ಥಿಸಿಕೊಳ್ಳುವ ಮೂಲಕ ದೇಶದಲ್ಲೇ ಅತಿ ದೊಡ್ಡ ಸುಳ್ಳು ಹೇಳಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಎಸ್‌ಟಿ ಮೂಲಕ ತೆರಿಗೆ ಸಂಗ್ರಹಿಸಿ ಕೇಂದ್ರಕ್ಕೆ ನೀಡುವ ಹಣದಲ್ಲಿ ನಮ್ಮ ಪಾಲು ಸರಿಯಾಗಿ ಕೊಡುತ್ತಿಲ್ಲ. ಭದ್ರಾ ಮೇಲ್ದಂಡೆ ಯೋಜನೆ ₹5,300 ಕೋಟಿ ನೀಡುವುದಾಗಿ ಹಿಂದಿನ ವರ್ಷದ ಬಜೆಟ್‌ನಲ್ಲಿ ಪ್ರಕಟಿಸಿದರೂ ಈವರೆಗೂ ಬಿಡುಗಡೆ ಮಾಡಿಲ್ಲ. ಎನ್‌ಡಿಆರ್‌ಎಫ್ ನಿಯಮದ ಅನ್ವಯ ಬರ ಬರಿಹಾರ ಕೊಟ್ಟಿಲ್ಲ. ಆದರೂ ಹಣ ನೀಡಿರುವುದಾಗಿ ಹಣಕಾಸು ಸಚಿವರು ಸುಳ್ಳು ಹೇಳುತ್ತಿದ್ದು, ನಿಮಗೆ ನಾಚಿಕೆಯಾಗಬೇಕು. ಪರಿಹಾರದ ಹಣ ಕೊಟ್ಟಿದ್ದರೆ ನಾವೇಕೆ ದೆಹಲಿಗೆ ಹೋಗಿ ಪ್ರತಿಭಟನೆ ಮಾಡುತ್ತಿದ್ದೆವು? ಪರಿಹಾರ ಕೊಡಿಸಿ ಎಂದು ಸುಪ್ರೀಂಕೋರ್ಟ್ ಮೆಟ್ಟಿಲೇಕೆ ಏರುತ್ತಿದ್ದೆವು? ಎಂದು ಪ್ರಶ್ನಿಸಿದರು.

ಅಘನಾಶಿನಿಗೆ ಅಡ್ಡಲಾಗಿ ನಿರ್ಮಿಸುತ್ತಿದ್ದ ಸೇತುವೆ ಕುಸಿತ

ಕುಮಟಾ: ಕುಮಟಾ ತಾಲೂಕಿನ ಮಿರ್ಜಾನ್-ಹೆಗಡೆ ತಾರಿಬಾಗಿಲ ಗ್ರಾಮಗಳನ್ನು ಸಂಪರ್ಕಿಸಲು ಅಘನಾಶಿನಿ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆಯ ಮಧ್ಯಭಾಗ ಬುಧವಾರ ಕುಸಿದು ಬಿದ್ದಿದೆ. ಸೇತುವೆಯ ಒಂದು ಕಂಬದಿಂದ ಇನ್ನೊಂದು ಕಂಬಕ್ಕೆ ಅಳವಡಿಸಿದ್ದ ಕಾಂಕ್ರೀಟ್ ತೊಲೆ (ಬೀಮ್) ಏಕಾಏಕಿ ಕುಸಿದು ಬಿದ್ದ ಪರಿಣಾಮ ಬೃಹತ್ ಗಾತ್ರದ ಕ್ರೇನ್, ಹಿಟಾಚಿ, ದ್ವಿಚಕ್ರ ವಾಹನ ಸೇರಿದಂತೆ ಕೋಟ್ಯಂತರ ಮೌಲ್ಯದ ಪರಿಕರಕ್ಕೆ ಹಾನಿಯಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

₹18 ಕೋಟಿ ವೆಚ್ಚದಲ್ಲಿ ಸೇತುವೆ ನಿರ್ಮಿಸಲಾಗುತ್ತಿದೆ. ಒಂದು ವರ್ಷದಿಂದ ಕಾಮಗಾರಿ ಪ್ರಗತಿಯಲ್ಲಿದೆ. ಈಗಾಗಲೆ ಶೇ.40ಕ್ಕಿಂತ ಹೆಚ್ಚು ಭಾಗದ ಕಾಮಗಾರಿ ನಡೆದಿದ್ದು, ಎರಡು ಕಂಬಗಳ ನಡುವೆ ಜೋಡಿಸಿಟ್ಟಿದ್ದ ಕಾಂಕ್ರೀಟ್ ತೊಲೆ ಕುಸಿದು ಹಾನಿ ಉಂಟಾಗಿದೆ. ಅಂದಾಜು ₹4 ಕೋಟಿ ಮೌಲ್ಯದ ಪರಿಕರ

ಅಘನಾಶಿನಿ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆಯ ಮಧ್ಯಭಾಗ ಕುಸಿದು ಬಿದ್ದಿದೆ.

ಹಾನಿಯಾಗಿದ್ದು, ತೊಲೆ ಕುಸಿದಿದ್ದರಿಂದ ₹50 ಲಕ್ಷದಷ್ಟು ನಷ್ಟ ಉಂಟಾಗಿದೆ. ಕಾಮಗಾರಿ ವೇಳೆ ಕ್ರೇನ್ ಬಡಿದು ತೊಲೆ ಕುಸಿದು ಬಿದ್ದಿರುವ ಸಾಧ್ಯತೆ ಇದೆ ಎಂದು ಶಂಕಿಸಲಾಗಿದೆ. ಪರಿಶೀಲನೆ ಕೈಗೊಳ್ಳಲಾಗಿದೆ ಎಂದು ಪಿಡಬ್ಲ್ಯುಡಿ ಎಇಇ ಎಂ.ಪಿ.ನಾಯ್ಕ ಪ್ರತಿಕ್ರಿಯಿಸಿದ್ದಾರೆ.

ಬರ ಪರಿಹಾರಕ್ಕಾಗಿ ಫೈಟ್, ರಾಜಕೀಯಕ್ಕಾಗಿ ಅಲ್ಲ

ಪರಿಹಾರ ಕೇಂದ್ರದ ಹೊಣೆ: ಮುನಿಯಪ್ಪ

ದೇವನಹಳ್ಳಿ: ರಾಜ್ಯದ ಬರ ನಿವಾರಿಸುವ ನಿಟ್ಟಿನಲ್ಲಿ ನ್ಯಾಯಯುತವಾಗಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಪರಿಹಾರಕ್ಕಾಗಿ ಸುಪ್ರೀಂಕೋರ್ಟ್ ಮೊರೆ ಹೋಗಿದ್ದೇವೆಯೇ ಹೊರತು ರಾಜಕೀಯ ಕಾರಣಕ್ಕಾಗಿ ಅಲ್ಲ ಎಂದು ಸಚಿವ ಕೆ.ಎಚ್. ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ರಾಜಕೀಯ ತಂತ್ರಗಾರಿಕೆ ಬಿಜೆಪಿಯವರಿಗೆ ಮಾತ್ರ ಗೊತ್ತಿದೆ. ನಾವು ನ್ಯಾಯ ಕೇಳುತ್ತಿದ್ದೇವೆ. ನ್ಯಾಯಾಂಗದ ವ್ಯವಸ್ಥೆಯಲ್ಲಿ ನಂಬಿಕೆ ಇದೆ. ಬರ ಪರಿಹಾರ ನೀಡುವಂತೆ ಮುಖ್ಯಮಂತ್ರಿ ಮತ್ತು ಸಚಿವರು ಹಲವು ಬಾರಿ ಕೇಂದ್ರಕ್ಕೆ ಮನವಿ ಸಲ್ಲಿಸಿದರೂ ಸ್ಪಂದನೆ ಸಿಗಲಿಲ್ಲ. ಹೀಗಾಗಿ ರಾಜ್ಯ ಸರಕಾರದ ಪ್ರತಿನಿಧಿಗಳು ಸಿಎಂ ನೇತೃತ್ವದಲ್ಲಿ ದೆಹಲಿಯಲ್ಲಿ ಪ್ರತಿಭಟನೆ ನಡೆಸಿದರು. ಇದಕ್ಕೂ ಪ್ರತಿಕ್ರಿಯೆ ದೊರೆಯದ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಮೊರೆ ಹೋಗಿದ್ದೇವೆ. ಪ್ರಾಕೃತಿಕ ವಿಕೋಪ ಸಂಭವಿಸಿದಾಗ ಆಯಾ ರಾಜ್ಯಗಳಿಗೆ ಸೇರಬೇಕಾದ ಪರಿಹಾರ ಬಿಡುಗಡೆ ಮಾಡಬೇಕಿರುವುದು ಕೇಂದ್ರ ಸರಕಾರದ ಹೊಣೆ ಎಂದರು.

ಸಮಾಚಾರ ಸಣ್ಣದಲ್ಲ

ಕಾರಾಗೃಹದಲ್ಲಿ ಸಿಮ್ ಕಾರ್ಡ್, ಶಸ್ತ್ರಾಸ್ತ್ರ ಪತ್ತೆ

ಮೈಸೂರು: ಇಲ್ಲಿನ ಕೇಂದ್ರ ಕಾರಾಗೃಹದ ಕೈದಿಗಳ ಬ್ಯಾರಕ್‌ಗಳಲ್ಲಿ ಸಿಮ್ ಕಾರ್ಡ್, ನಗದು ಹಾಗೂ ಮಾರಕಾಸ್ತ್ರಗಳು ಪತ್ತೆಯಾಗಿವೆ ಎಂದು ಮೈಸೂರು ನಗರ ಪೊಲೀಸ್ ಆಯುಕ್ತ ಬಿ. ರಮೇಶ್ ಮಾಹಿತಿ ನೀಡಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆ ನಗರ ಪೊಲೀಸ್ ಆಯುಕ್ತರ ರಮೇಶ್ ಬಾನೋತ್, ಡಿಸಿಪಿ ಎಂ. ಮುತ್ತುರಾಜ್ ಹಾಗೂ ಎಸ್. ಜಾಹ್ನವಿ ನೇತೃತ್ವದಲ್ಲಿ ಪೊಲೀಸ್ ಅಧಿಕಾರಿಗಳು ಹಾಗೂ ಶ್ವಾನದಳ, ಬೆರಳಚ್ಚು ತಜ್ಞರ ತಂಡ, ಸಿಟಿ ಕ್ರೈಂ, ಬ್ರಾಂಚ್, ಸ್ಪೆಷಲ್ ಬ್ರಾಂಚ್ ಸೇರಿ 200ಕ್ಕೂ ಹೆಚ್ಚು ಸಿಬ್ಬಂದಿ ಕೇಂದ್ರ ಕಾರಾಗೃಹಕ್ಕೆ ದಿಢೀರ್ ಭೇಟಿ ನೀಡಿ ತೀವ್ರ ತಪಾಸಣೆ ನಡೆಸಿದರು.

13 ಆರೋಪಿಗಳಿಗೆ ಗಡಿಪಾರು: ಅಗರ್ವಾಲ್

ಮಂಗಳೂರು: ಲೋಕಸಭಾ ಚುನಾವಣೆ ಹಿನ್ನೆಲೆ ಕಮಿಷನರೇಟ್ ವ್ಯಾಪ್ತಿಯಲ್ಲಿ ಮತ್ತೆ 13 ಆರೋಪಿಗಳನ್ನು ಗಡಿಪಾರು ಮಾಡಲಾಗಿದೆ. ನಾಲ್ವರು ಆರೋಪಿಗಳ ವಿರುದ್ಧ ಗೂಂಡಾ ಕಾಯ್ದೆಯಡಿ ಕ್ರಮವಹಿ ಸಲಾಗಿದೆ ಎಂದು ಎಸ್‌ಪಿ ಅನುಪಮ್ ಅಗರ್ವಾಲ್ ತಿಳಿಸಿದ್ದಾರೆ. ಜ್ಞಾನೇಶ್ ನಾಯಕ್, ಫಹಾದ್ ಅಲಿಯಾಸ್ ಅಬ್ದುಲ್ ಫಹಾದ್, ಧನುಷ್ ಅಲಿಯಾಸ್ ರಮಿತ್ ರಾಜ್, ಮೊಹಮ್ಮದ್ ಸುಹೇಬ್, ದೀಪಕ್ ಪೂಜಾರಿ ಅಲಿಯಾಸ್ ದೀಪು, ಸಾಹಿಲ್ ಇಸ್ಮಾಯಿಲ್, ಮೊಹಮ್ಮದ್ ಶಾಕಿರ್ ಅಲಿಯಾಸ್ ಜಕೀರ ಹುಸೇನ್, ಇಬ್ರಾಹಿಂ ಖಲೀಲ್, ಧನುಷ್, ನೌಫಾಲ್, ಹವಿತ್ ಪೂಜಾರಿ, ಕೌಶಿಕ್ ನಿಹಾಲ್ (24) ಸಂತೋಷ್ ಶೆಟ್ಟಿ (34) ಗಡಿಪಾರಿಗೆ ಒಳಗಾದವರು ಎಂದರು.

ಬಿಜೆಪಿ ಸಮಾವೇಶ ನಾಯಕರ ಜೇಬಿಗೆ ಕನ್ನ

ಮಡಿಕೇರಿ: ರಾಜ್ಯ ಬಿಜೆಪಿ ನಾಯಕರು ಭಾಗಿಯಾಗಿದ್ದ ಕಾರ್ಯಕ್ರಮದಲ್ಲಿ ಮುಖಂಡರ ಜೇಬಿಗೆ ಕತ್ತರಿ ಹಾಕಿರುವ ಕಳ್ಳರು ಲಕ್ಷಾಂತರ ರುಪಾಯಿ ಎಗರಿಸಿ ಪರಾರಿಯಾಗಿದ್ದಾರೆ. ಮಡಿಕೇರಿಯ ಕ್ರಿಸ್ಟಲ್ ಕೋರ್ಟ್ ನಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾಜಿ ಶಾಸಕ ಅಪ್ಪಚ್ಚು ರಂಜನ್ ಸೇರಿ ಹಲವು ನಾಯಕರ ಜೇಬಿನಿಂದ ಹಣ ಕಳ್ಳತನ ಮಾಡಿದ್ದಾರೆ. ಜೇಬಿನಲ್ಲಿ 20 ಸಾವಿರ ಇತ್ತು ಎನ್ನಲಾಗಿದ್ದು, ಕೆ.ಜಿ ಬೋಪಯ್ಯ ಅವರ ಜೇಬಿನಿಂದ 13 ಸಾವಿರ ರು, ಗುತ್ತಿಗೆದಾರರೊಬ್ಬರ ಜೇಬಿನಿಂದ 50 ಸಾವಿರ ರು. ಬಿಜೆಪಿ ಮುಖಂಡರೊಬ್ಬರ ಜೇಬಿನಿಂದ 25 ಸಾವಿರ ರು. ಎಗರಿಸಿದ್ದಾರೆ.

ಭದ್ರಾ ಜಲಾಶಯದಿಂದ ನಿತ್ಯ 3 ಸಾವಿರ ಕ್ಯು.ನೀರು

ಶಿವಮೊಗ್ಗ: ಪ್ರಾದೇಶಿಕ ಆಯುಕ್ತರ ಆದೇಶದಂತೆ ತುಂಗಭದ್ರಾ ನದಿ ಪಾತ್ರದ ಹಳ್ಳಿ-ಪಟ್ಟಣಗಳ ಕುಡಿಯುವ ನೀರಿನ ಉದ್ದೇಶಕ್ಕಾಗಿ ಲಕ್ಕವಳ್ಳಿಯ ಭದ್ರಾ ಜಲಾಶಯದಿಂದ ನದಿಗೆ ನಿತ್ಯ 3 ಸಾವಿರ ಕ್ಯುಸೆಕ್ ನೀರು ಹರಿಸಲಾಗುತ್ತಿದೆ.ಮಾ.29ರ ರಾತ್ರಿಯಿಂದ ಏ.6ರ ರಾತ್ರಿಯವರೆಗೆ 7 ದಿನ ನಿತ್ಯ 3 ಸಾವಿರ ಕ್ಯುಸೆಕ್ ಹಾಗೂ ಏ.6ರಂದು 2200 ಕ್ಯುಸೆಕ್ ನದಿಗೆ ಹರಿಸಲಾಗುವುದು. ಈ 8 ದಿನಗಳ ಅವಧಿಯಲ್ಲಿ ನದಿಗೆ 23,200 ಕ್ಯುಸೆಕ್ (2 ಟಿಎಂಸಿ ಅಡಿ) ನೀರು ಹರಿಸಲಾಗುತ್ತಿದೆ. ಈ ವೇಳೆ ನದಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳನ್ನು ತೆಗೆಯುವಂತೆ ನೀರಾವರಿ ನಿಗಮದ ಪ್ರಕಟಣೆ ತಿಳಿಸಿದೆ.

ರಾಜ್ಯದ 62 ಕಡೆ ಲೋಕಾ ದಾಳಿ

13 ಸರಕಾರಿ ಅಧಿಕಾರಿಗಳ ಮನೆ, ಕಚೇರಿ ಪರಿಶೀಲನೆ | ಅಪಾರ ಪ್ರಮಾಣದ ನಗದು, ಚಿನ್ನಾಭರಣ ಪತ್ತೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಲೋಕಾಯುಕ್ತ ಪೊಲೀಸರು ರಾಜ್ಯದ 13 ಸರಕಾರಿ ಅಧಿಕಾರಿಗಳಿಗೆ ಸೇರಿದ ಮನೆ, ಕಚೇರಿ ಸೇರಿದಂತೆ 62 ಕಡೆಗಳಲ್ಲಿ ಬುಧವಾರ ಬೆಳಗ್ಗೆ ದಾಳಿ ನಡೆಸಿದ್ದು, ಈ ವೇಳೆ ಕೋಟ್ಯಂತರ ರು. ಮೌಲ್ಯದ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ಬೆಂಗಳೂರು ನಗರ, ಉಡುಪಿ, ಕಾರವಾರ, ಮಂಡ್ಯ, ಮೈಸೂರು, ಕೊಡಗು, ಧಾರವಾಡ, ಬೀದರ್, ಕೋಲಾರ, ವಿಜಯಪುರ, ಚಿಕ್ಕಬಳ್ಳಾಪುರ ಮತ್ತು ಬೆಳಗಾವಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 13 ಸರಕಾರಿ ಅಧಿಕಾರಿಗಳ ಕಚೇರಿ ಹಾಗೂ ನಿವಾಸದ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ. ಈ ವೇಳೆ ಅಪಾರ ಪ್ರಮಾಣ ನಗದು, ಚಿನ್ನ, ಬೆಳ್ಳಿ ಆಭರಣ, ವಿದೇಶಿ ಉಡುಗೊರೆ, ಮೊಬೈಲ್ ಫೋನ್, ನಿವೇಶನ, ಫಾರ್ಮ್‌ಹೌಸ್ ಖರೀದಿಯ ದಾಖಲೆ ಪತ್ರಗಳು ಪತ್ತೆಯಾಗಿವೆ.

ದಾಳಿಯಲ್ಲಿ 13 ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿಗಳು, 12 ಡಿವೈಎಸ್ಪಿ, 25 ಪೊಲೀಸ್ ಇನ್‌ಸ್ಪೆಕ್ಟರ್‌ಗಳು ಸೇರಿದಂತೆ ಒಟ್ಟು 130 ಅಧಿಕಾರಿಗಳು ಪಾಲ್ಗೊಂಡಿದ್ದರು.

ಎಂ.ಎಂ.ಫಯಾಜ್ ಅಹಮದ್ - ಸಹಾಯಕ ಇಂಜಿನಿಯರ್ ಆರ್‌ಡಿಪಿಆರ್‌ಡಿ, ಕೊಡಗು: ಫಯಾಜ್ ಅಹಮದ್‌ಗೆ ಸೇರಿದ ಐದು ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ಶೋಧ ನಡೆಸಿದಾಗ 2 ಮನೆ, 4 ಎಕರೆ ಕೃಷಿ ಭೂಮಿ, 48 ಸಾವಿರ ರು. ನಗದು, 2.95 ಲಕ್ಷ ರು. ಮೌಲ್ಯದ ಆಭರಣ, 24.75 ಲಕ್ಷ ರು. ಮೌಲ್ಯದ ವಾಹನ, 82 ಲಕ್ಷ ರು. ಮೌಲ್ಯದ ಪೀಠೋಪಕರಣ ಸೇರಿದಂತೆ 1.69 ಕೋಟಿ ರು. ಮೌಲ್ಯದ ಆಸ್ತಿ ಬೆಳಕಿಗೆ ಬಂದಿದೆ.

ಬಿ.ವಿ. ಜಯಣ್ಣ ಮುಖ್ಯ ಕಾರ್ಯನಿರ್ವಹಕ ಇಂಜಿನಿಯರ್, ಕೊಡಗು: 2 ಸ್ಥಳಗಳಲ್ಲಿ ಪರಿಶೀಲನೆ ನಡೆಸಿರುವ ಅಧಿಕಾರಿಗಳು, 1 ಸೈಟ್, 3 ಮನೆ, 5.33 ಎಕರೆ ಕೃಷಿ ಭೂಮಿ, 9.20 ಲಕ್ಷ ರು. ನಗದು, 8.63 ಲಕ್ಷ ರು. ಮೌಲ್ಯದ ಆಭರಣ ಸೇರಿದಂತೆ 1.30 ಕೋಟಿ ರು. ಮೌಲ್ಯದ ಆಸ್ತಿ ಇರುವುದು ಗೊತ್ತಾಗಿದೆ.

ಯತೀಶ್ ಮಂಚನಾಯಕನಹಳ್ಳಿ ಗ್ರಾಪಂ ಪಿಡಿಒ, ರಾಮನಗರ ಜಿಲ್ಲೆ: ಮನೆ, ಕಚೇರಿ ಸೇರಿದಂತೆ ಐದು ಸ್ಥಳಗಳ ಮೇಲೆ ದಾಳಿ ನಡೆಸಿ 4 ಸೈಟ್‌ಗಳು, 1 ಮನೆ, 5.31 ಲಕ್ಷ ರು. ನಗದು, 25.55 ಲಕ್ಷ ರು. ಮೌಲ್ಯದ ಆಭರಣ, 22.98 ಲಕ್ಷ ರು. ಮೌಲ್ಯದ ವಾಹನ, 39.59 ಲಕ್ಷ ರು. ಮೌಲ್ಯದ ಪೀಠೋಪಕರಣ ಸೇರಿದಂತೆ 2.23 ಕೋಟಿ ರು. ಮೌಲ್ಯದ ಆಸ್ತಿ ಪತ್ತೆ.

ಸದಾಶಿವಯ್ಯ ಕಾರ್ಯನಿರ್ವಾಹಕ ಇಂಜಿನಿಯರ್, ಕೆಆರ್‌ಐಡಿಎಲ್, ಚಿಕ್ಕಬಳ್ಳಾಪುರ: ಆರು ಸ್ಥಳಗಳಲ್ಲಿ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ 3 ಮನೆಗಳು ಪತ್ತೆಯಾಗಿವೆ. 80 ಲಕ್ಷ ರು. ನಗದು, 8.50 ಲಕ್ಷ ರು. ಮೌಲ್ಯದ ವಾಹನಗಳು, 24.70 ಲಕ್ಷ ರು. ಮೌಲ್ಯದ ಪೀಠೋಪಕರಣ ಸೇರಿದಂತೆ 1.27 ಕೋಟಿ ರು. ಮೌಲ್ಯದ ಆಸ್ತಿ ಬೆಳಕಿಗೆ ಬಂದಿದೆ.

ಪ್ರಕಾಶ್-ಕಿರಿಯ ಇಂಜಿನಿಯರ್, ಕಾರವಾರ, ಉತ್ತರ ಕನ್ನಡ ಜಿಲ್ಲೆ: ಕಾರವಾರ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಕಾಶ್ ಮನೆ ಮತ್ತು ಸಂಬಂಧಿಕರ ಮನೆ ಸೇರಿದಂತೆ 4 ಸ್ಥಳಗಳಲ್ಲಿ ಶೋಧ ನಡೆಸಿರುವ ಅಧಿಕಾರಿಗಳು, 1 ಸೈಟ್, 5 ಮನೆ ಮತ್ತು 42 ಸಾವಿರ ರು. ನಗದು, 2.81 ಲಕ್ಷ ರು. ಮೌಲ್ಯದ ಆಭರಣ, 9.20 ಲಕ್ಷ ರು. ಮೌಲ್ಯದ ವಾಹನ ಸೇರಿದಂತೆ 3.51 ಕೋಟಿ ರು. ಮೌಲ್ಯದ ಆಸ್ತಿ ಪತ್ತೆ.

ಎಂ.ರೂಪಾ- ಹೆಚ್ಚುವರಿ ಡಿಸಿ, ಅಬಕಾರಿ ಇಲಾಖೆ, ಉಡುಪಿ:

ಐದು ಸ್ಥಳಗಳಲ್ಲಿ ಶೋಧ. 5 ಮನೆ, 8.18 ಎಕರೆ ಕೃಷಿ ಭೂಮಿ, 1.06 ಲಕ್ಷ ರು. ನಗದು, 13 ಲಕ್ಷ ರು. ಮೌಲ್ಯದ ಆಭರಣ, 33 ಲಕ್ಷ ರು. ಮೌಲ್ಯದ ಪೀಠೋಪಕರಣ ಸೇರಿದಂತೆ 2.26 ಕೋಟಿ ರು. ಮೌಲ್ಯದ ಆಸ್ತಿ ಪತ್ತೆ.

ಸದಾಶಿವ ಜಯಪ್ಪ ಕರಗಾರ್-ಕಾರ್ಯದರ್ಶಿ-1/ಪಿಡಿಒ, ನಿಡಗುಂದಿ ಗ್ರಾಪಂ ಬೆಳಗಾವಿ: 1 ಸೈಟ್, 2 ಮನೆ, 3.22 ಎಕರೆ ಕೃಷಿ ಭೂಮಿ, 13 ಸಾವಿರ ರು. ನಗದು, 6.84 ಲಕ್ಷ ರು. ಮೌಲ್ಯದ ಆಭರಣ ಸೇರಿದಂತೆ 93 ಲಕ್ಷ ರೂ. ಮೌಲ್ಯದ ಆಸ್ತಿ ಪತ್ತೆ.

ಮಹೇಶ್ ಚಂದ್ರಯ್ಯ ಹೀರೆಮಠ್, ಅರಣ್ಯ ವಲಯದ ಅಧಿಕಾರಿ, ಧಾರವಾಡ : 6 ಸ್ಥಳಗಳಲ್ಲಿ ಪರಿಶೀಲನೆ ನಡೆಸಿ, 7 ಸೈಟ್, 1 ಮನೆ, 27 ಎಕರೆ ಕೃಷಿ ಭೂಮಿ, 3 ಲಕ್ಷ ರು. ನಗದು, 32 ಲಕ್ಷ ರು. ಮೌಲ್ಯದ ಚಿನ್ನಾಭರಣ ಸೇರಿದಂತೆ 1.93 ಕೋಟಿ ರು. ಮೌಲ್ಯದ ಆಸ್ತಿ ಜಪ್ತಿ.

ಷಣ್ಮುಗಪ್ಪ ಬೀಷ್ಮ ತೀರ್ಥ, ಎಆರ್‌ಟಿಒ ಜಮಖಂಡಿ: 7 ಸ್ಥಳಗಳ ಮೇಲೆ ದಾಳಿ. 3 ಸೈಟ್, 3 ಮನೆ, 48 ಎಕರೆ ಕೃಷಿ ಭೂಮಿ, 2.82 ಲಕ್ಷ ರು. ನಗದು, 33.80 ಲಕ್ಷ ರು. ಮೌಲ್ಯದ ಆಭರಣ, 42 ಲಕ್ಷ ರು. ಮೌಲ್ಯದ ವಾಹನ ಸೇರಿದಂತೆ 2.17 ಕೋಟಿ ರು. ಮೌಲ್ಯದ ಆಸ್ತಿ ಪತ್ತೆ.

ಯಾರ‍್ಯಾರ ಮೇಲೆ ದಾಳಿ

ಮುಖ್ಯ ಎಂಜಿನಿಯರ್ ಎಸ್.ಪಿ. ರಂಗನಾಥ್

ಬಿಬಿಎಂಪಿ ಯಲಹಂಕ/ಬ್ಯಾಟರಾಯನಪುರ ವಿಭಾಗದ ಮುಖ್ಯ ಎಂಜಿನಿಯರ್‌ರಂಗನಾಥ್‌ಗೆ ಸೇರಿದ ಕಚೇರಿ, ಮನೆ, ಸಂಬಂಧಿಕರ ಮನೆ ಸೇರಿದಂತೆ ಐದು ಸ್ಥಳಗಳ ಮೇಲೆ ದಾಳಿ ನಡೆಸಿದ್ದು, ಆದಾಯಕ್ಕಿಂತ ಹೆಚ್ಚಿನ ಆಸ್ತಿ ಪತ್ತೆಯಾಗಿದೆ. 2 ನಿವೇಶನ, 2 ಮನೆ, 2 ಕಮರ್ಷಿಯಲ್ ಕಾಂಪ್ಲೆಕ್ಸ್, 2.5 ಎಕರೆ ಕೃಷಿ ಭೂಮಿ ಸೇರಿ 6.15 ಕೋಟಿ ರು. ಮೌಲ್ಯದ ಸ್ಥಿರಾಸ್ತಿ ಪತ್ತೆಯಾಗಿದೆ. ಅದೇ ರೀತಿ 7 ಲಕ್ಷ ರು. ನಗದು, 31.86 ಲಕ್ಷ ರು. ಮೌಲ್ಯದ ಚಿನ್ನಾಭರಣ, 36 ಲಕ್ಷ ರು. ಮೌಲ್ಯದ ವಾಹನಗಳು, 24 ಲಕ್ಷ ರು. ಮೌಲ್ಯದ ಬ್ಯಾಂಕ್ ಠೇವಣಿ ಸೇರಿದಂತೆ ಒಟ್ಟಾರೆ 5.28 ಕೋಟಿ ರೂ. ಮೌಲ್ಯದ ಆಸ್ತಿ ಪತ್ತೆಯಾಗಿದೆ.

ಶಿವಕುಮಾರಸ್ವಾಮಿ ಕಾರ್ಯನಿರ್ವಾಹಕ ಇಂಜಿನಿಯರ್, ಬೀದರ್

5 ಸ್ಥಳಗಳಲ್ಲಿ ಪರಿಶೀಲನೆ. 3 ಸೈಟ್‌ಗಳು, 4 ಮನೆಗಳು, 2 ಎಕರೆ ಕೃಷಿ ಭೂಮಿ, 1 ಲಕ್ಷ ರು. ನಗದು, 24 ಲಕ್ಷ ರು. ಮೌಲ್ಯದ ಆಭರಣ, 19 ಲಕ್ಷ ರು. ಮೌಲ್ಯದ ವಾಹನಗಳು ಸೇರಿದಂತೆ 2.78 ಕೋಟಿ ರು. ಮೌಲ್ಯದ ಆಸ್ತಿ ಬೆಳಕಿಗೆ.

ನಾಗರಾಜಪ್ಪ ಸಹಾಯಕ ನಿರ್ದೇಶಕ, ನಗರ ಯೋಜನೆ, ಮಾಗಡಿ ಯೋಜನ ಪ್ರಾಧಿಕಾರ, ರಾಮನಗರ: ಸಹಾಯಕ ನಿರ್ದೇಶಕರಿಗೆ ಸೇರಿದ 5 ಸ್ಥಳಗಳ ಮೇಲೆ ದಾಳಿ. 1 ಸೈಟ್, 6 ಮನೆ, 13 ಕೃಷಿ ಭೂಮಿ, 11.50 ಲಕ್ಷ ರು. ನಗದು, 25 ಲಕ್ಷ ರು. ಮೌಲ್ಯದ ಚಿನ್ನಾಭರಣ, 40 ಲಕ್ಷ ರು. ಮೌಲ್ಯದ ವಾಹನ ಸೇರಿದಂತೆ 11.13 ಕೋಟಿ ರು. ಮೌಲ್ಯದ ಆಸ್ತಿ ಪತ್ತೆ.

ಎಸ್‌ಡಿಎ ಕೃಷ್ಣೇಗೌಡ ಅಗಸನಪುರ ಗ್ರಾಮ ಪಂಚಾಯಿತಿ ಮಳವಳ್ಳಿ, ಮಂಡ್ಯ

ಐದು ಸ್ಥಳಗಳ ಮೇಲೆ ದಾಳಿ ನಡೆಸಿರುವ ಲೋಕಾಯುಕ್ತ ಪೊಲೀಸರು, 5 ನಿವೇಶನ, 1 ಮನೆ ದಾಖಲೆ ಪತ್ರಗಳನ್ನು ಜಪ್ತಿ ಮಾಡಿದ್ದಾರೆ. 1.66 ಲಕ್ಷ ರು. ನಗದು, 35 ಲಕ್ಷ ರು. ಮೌಲ್ಯದ ಚಿನ್ನಾಭರಣ, 12 ಲಕ್ಷ ರು. ಮೌಲ್ಯದ ವಾಹನ ಸೇರಿದಂತೆ 2.18 ಕೋಟಿ ರು. ಮೌಲ್ಯದ ಆಸ್ತಿಯನ್ನು ಪತ್ತೆಹಚ್ಚಿದ್ದಾರೆ.

ಸುಮಲತಾ ಜತೆ ಶತ್ರುತ್ವವಿಲ್ಲ: ಎಚ್‌ಡಿಕೆ

★ಸಮಯ ಬಂದಾಗ ಸುಮಲತಾ ಜತೆ ಮಾತನಾಡುವೆ
★ರಾಮಾಂಜನೇಯರ ನಡುವೆಯೇ ಯುದ್ಧವಾಗಿಲ್ಲವೇ ?

ಬೆಂಗಳೂರು: ರಾಜಕಾರಣದಲ್ಲಿ ಶತ್ರುತ್ವ ಎನ್ನುವುದು ಶಾಶ್ವತವಲ್ಲ. ಮಂಡ್ಯ ಸಂಸದೆ ಸುಮಲತಾ ಅವರು ನನಗೆ ಶತ್ರುವಲ್ಲ. ಅವರನ್ನು ಭೇಟಿಯಾಗುವುದಕ್ಕೆ ಯಾವುದೇ ಹಿಂಜರಿಕೆ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ, ಮಂಡ್ಯ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಖಂಡಿತವಾಗಿಯೂ ಸುಮಲತಾ ಅವರು ನನಗೆ ಶತ್ರು ಅಲ್ಲ. ಅಂಬರೀಶ್ ಬದುಕಿದ್ದಾಗ ಜತೆಯಲ್ಲಿ ಅವರ ಮನೆಯಲ್ಲಿ ಊಟ ಮಾಡಿದ್ದೇವೆ. ಆಗ ಸುಮಲತಾ ಅವರೇ ನಮಗೆ ಊಟ ಬಡಿಸಿದ್ದಾರೆ. ಹೀಗಿರುವಾಗ ಆಗಿ ಹೋಗಿದ್ದನ್ನೇ ಸಾಧಿಸಿಕೊಂಡು ಹೋಗುವ ಅವಶ್ಯಕತೆ ಇಲ್ಲ ಎಂದರು. ರಾಜಕೀಯ ಸನ್ನಿವೇಶ, ಆಯಾ ಸಂದರ್ಭದಲ್ಲಿ ಸಂಘರ್ಷ ಆಗಿದೆ. ರಾಮಾಂಜನೇಯರ ನಡುವೆಯೇ ಯುದ್ಧ ಆಗಿದೆಯಲ್ಲವೇ? ಅವರ ಮುಂದೆ ನಾವೆಷ್ಟು? ನಾವು ಹುಲು ಮಾನವರು. ಸಮಯ ಬಂದಾಗ ನಾನು ಸುಮಲತಾ ಅವರ ಜತೆ ಮಾತನಾಡುತ್ತೇನೆ ಎಂದ ತಿಳಿಸಿದರು.

ಸಚಿವ ಚಲುವರಾಯಸ್ವಾಮಿಗೆ ಎಚ್‌ಡಿಕೆ ತಿರುಗೇಟು

ಮಂಡ್ಯ ಕ್ಷೇತ್ರದಲ್ಲಿ ಸಿ.ಎಸ್.ಪುಟ್ಟರಾಜು ಅವರಿಗೆ ಜೆಡಿಎಸ್ ಟಿಕೆಟ್ ಸಿಗದೇ ಇರುವ ಬಗ್ಗೆ ವ್ಯಂಗ್ಯವಾಡಿದ್ದ ಸಚಿವ ಎನ್. ಚಲುವರಾಯಸ್ವಾಮಿ ಅವರಿಗೆ ತಿರುಗೇಟು ನೀಡಿದ ಕುಮಾರಸ್ವಾಮಿ, ಪುಟ್ಟರಾಜು ಅವರಿಗೆ ಇನ್ನೂ ಚೆನ್ನಾಗಿರುವ ವಧುವನ್ನೇ ನೋಡೋಣ. ಅವರ ಬಗ್ಗೆ ಬೇರೆಯವರಿಗೆ ಚಿಂತೆ ಬೇಕಿಲ್ಲ ಎಂದು ಹೇಳಿದರು. ಅಲ್ಲದೆ, ಮಂಡ್ಯದ ಮೇಲೆ ಕೆಟ್ಟ ದೃಷ್ಟಿ ಬೀಳಬಾರದು ಅಂತ ಅವರು ಹೇಳಿದ್ದಾರೆ. ನನ್ನ ದೃಷ್ಟಿ ಕೆಟ್ಟದ್ದಲ್ಲ, ಅಷ್ಟು ಸಣ್ಣತನದಲ್ಲಿ ಮಾತನಾಡುವುದು ಬೇಡ ಎಂದು ಅವರಿಗೆ ಹೇಳಲು ಬಯಸುತ್ತೇನೆ ಎಂದು ಅವರು ಎಚ್ಚರಿಕೆ ನೀಡಿದರು.

ಕಾಂಗ್ರೆಸ್ ಅಭ್ಯರ್ಥಿ ಹೆಸರು ಬರಲಿ

ಕೋಲಾರದಲ್ಲಿ ಕಾಂಗ್ರೆಸ್ ಟಿಕೆಟ್ ಬಗ್ಗೆ ನಡೆದಿರುವ ಹೈಡ್ರಾಮಾವನ್ನು ಮಾಧ್ಯಮಗಳಲ್ಲಿ ಗಮನಿಸಿದ್ದೇನೆ. ಅಲ್ಲಿನ ರಾಜಕೀಯವನ್ನು ಸೂಕ್ಷ್ಮವಾಗಿ ನೋಡುತ್ತಿದ್ದೇನೆ. ಹಲವಾರು ರೀತಿಯ ಬೆಳವಣಿಗೆಗಳು ಆಗಿವೆ. ಆದ್ದರಿಂದ ನಾವು ಇನ್ನೂ ಅಧಿಕೃತ ಘೋಷಣೆ ಮುಂದೂಡಿದ್ದೇವೆ ಅಷ್ಟೇ. ತಾವು ಯಾರನ್ನೂ ತೆಗೆದುಕೊಳ್ಳಲು ಪ್ರಯತ್ನ ಮಾಡುತ್ತಿಲ್ಲ. ನಮ್ಮಲ್ಲಿ ಇಬ್ಬರು ಅಭ್ಯರ್ಥಿಗಳಿದ್ದಾರೆ. ಪಕ್ಷದಲ್ಲಿ ಶಿಸ್ತಿನಿಂದ ಇರುವವರ ಹೆಸರು ಘೋಷಣೆ ಮಾಡುತ್ತೇವೆ. ಯಾವುದೇ ಗೊಂದಲವಿಲ್ಲ. ಆ ಜಿಲ್ಲೆಯ ಬೆಳವಣಿಗೆಗಳ ಬಗ್ಗೆ ಗಮನ ಇಟ್ಟಿದ್ದೇವೆ ಅಷ್ಟೇ ಎಂದು ಕುಮಾರಸ್ವಾಮಿ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಕಾಂಗ್ರೆಸ್ ನಾಯಕರ ಒಳಜಗಳದಿಂದ ಎನ್‌ಡಿಎ ಮೈತ್ರಿಕೂಟಕ್ಕೆ ಲಾಭವಾಗುತ್ತದೆ. ಬಿಜೆಪಿ ಮತ್ತು ಜೆಡಿಎಸ್ ಹೊಂದಾಣಿಕೆಯಿಂದ ನಮಗೆ ಗೆಲುವು ನಿಶ್ಚಿತ. ಅಭ್ಯರ್ಥಿಗಳ ಪಟ್ಟಿ ಸಿದ್ಧವಿದೆ ಎಂದು ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಗ್ಯಾರಂಟಿ ಅಲೆ

ರಾಜ್ಯದ 20ಕ್ಕೂ ಹೆಚ್ಚು ಕ್ಷೇತ್ರ ಗೆಲ್ಲುವ ವಿಶ್ವಾಸವಿದೆ: ಡಿಕೆಶಿ

ಮೈಸೂರು: ರಾಜ್ಯದಲ್ಲಿ ಯಾವುದೇ ರೀತಿಯ ಬಿಜೆಪಿ ಪರ ಅಲೆ ಇಲ್ಲ, ಮೋದಿ ಅಲೆ ಇಲ್ಲ, ಇದನ್ನು ತಲೆಯಲ್ಲಿಟ್ಟುಕೊಳ್ಳಿ. ರಾಜ್ಯದಲ್ಲಿ ಇರುವುದು ಕಾಂಗ್ರೆಸ್ ಅಲೆ, ಗ್ಯಾರಂಟಿ ಅಲೆ ಇದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ ಹೇಳಿದರು.

ಇಲ್ಲಿನ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಆಯೋಜಿಸಲಾಗಿದ್ದ ಪಕ್ಷದ ಕಾರ್ಯಾಧ್ಯಕ್ಷ ತನ್ವೀರ್ ಸೇಠ್ ಅಧಿಕಾರ ಸ್ವೀಕಾರ ಹಾಗೂ ಇತರೆ ಪಕ್ಷಗಳ ಮುಖಂಡರ ಕಾಂಗ್ರೆಸ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ನಾವು ಕೊಟ್ಟ ಅನ್ನಭಾಗ್ಯ ಅಕ್ಕಿಗೆ ಅರಿಶಿಣ, ಕುಂಕುಮ ಹಾಕಿ ಬಿಜೆಪಿಯವರು ಅಕ್ಷತೆ ಹಂಚಿದರು. ದೇವಾಲಯಗಳಲ್ಲಿ ಪೂಜೆ ಮುಗಿದ ನಂತರ ಅಕ್ಷತೆ ನೀಡುತ್ತಾರೆ. ಆದರೆ ಬಿಜೆಪಿಯವರು ಪೂಜೆಯಲ್ಲ, ಮಂದಿರ ಉದ್ಘಾಟನೆಗೂ ಮುನ್ನವೇ ಮಂತ್ರಾಕ್ಷತೆ ನೀಡಿದ್ದಾರೆ ಎಂದು ಟೀಕಿಸಿದರು.

ಎಲ್ಲೆಡೆ ಜನ ನಮ್ಮ ಗ್ಯಾರಂಟಿ ಯೋಜನೆಗಳನ್ನು ಸ್ವಾಗತಿಸುತ್ತಿದ್ದಾರೆ. ಮಂಡ್ಯ ಇರಲಿ, ಮೈಸೂರು, ಚಾಮರಾಜನಗರ, ಹಾಸನ, ಬೆಂಗಳೂರು ಗ್ರಾಮಾಂತರ ಸೇರಿದಂತೆ ಹಳೆ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷ ಗೆದ್ದೇ ಗೆಲ್ಲಲಿದೆ. ರಾಜ್ಯದಲ್ಲಿ ನಾವು 20ಕ್ಕೂ ಹೆಚ್ಚು ಕ್ಷೇತ್ರಗಳನ್ನು ಗೆದ್ದೇ ಗೆಲ್ಲುತ್ತೇವೆ. ಬಿಜೆಪಿಯಲ್ಲಿ ಗೋಬ್ಯಾಕ್ ಸೇರಿದಂತೆ ಅನೇಕ ವಿಚಾರಗಳು ನಡೆಯುತ್ತಿವೆ. ನಾವು ಮೈಸೂರಿನಲ್ಲಿ ಲಕ್ಷ್ಮಣ್ ಅವರಿಗೆ ಟಿಕೆಟ್ ನೀಡಿದ್ದೇವೆ. ಅವರು ಯಾರು? ಪಕ್ಷದ ಧ್ವಜ ಹಿಡಿದು ಪಕ್ಷದ ಪರವಾಗಿ ತಮ್ಮ ಧ್ವನಿ ಎತ್ತಿಕೊಂಡು ಬಂದಿದ್ದಾರೆ. ಒಬ್ಬ ಕಾರ್ಯಕರ್ತನನ್ನು, ಬಡವನನ್ನು ಗುರುತಿಸಿ ಟಿಕೆಟ್ ನೀಡಿದ್ದೇವೆ ಎಂದರು.

ಮೇಕೆದಾಟು ಜಾರಿಗೊಳಿಸಲು ಸಚಿವನಾಗಿರುವೆ

ಕೇಂದ್ರ ಸರಕಾರ ತೆರಿಗೆ ಸೇರಿದಂತೆ ಅನೇಕ ವಿಚಾರವಾಗಿ ನಮಗೆ ದ್ರೋಹ ಬಗೆದಿದೆ. ಮೇಕೆದಾಟು ಯೋಜನೆಗೆ ಅನುಮತಿ ನೀಡಿ ಎಂದು ನಾವು ಆಗ್ರಹಿಸುತ್ತಾ ಬಂದಿದ್ದೇವೆ. ಈಗ ದೇವೇಗೌಡರು ಈ ಮೇಕೆದಾಟು ಯೋಜನೆಗೆ ಎಲ್ಲರೂ ಒಗ್ಗಟ್ಟಿನಿಂದ ಹೋರಾಡಬೇಕು ಎಂದು ಹೇಳುತ್ತಿದ್ದಾರೆ. ನಾವು ಮೇಕೆದಾಟು ಯೋಜನೆ ಆಗ್ರಹಿಸಿ ಪಾದಯಾತ್ರೆ ಮಾಡಿದಾಗ ನಿಮ್ಮ ಕೂಗು ಏನಾಗಿತ್ತು? ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಮಂಡ್ಯ, ಮೈಸೂರು, ಹಾಸನ, ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಜನ ಪೆಟ್ಟು ನೀಡಲಿದ್ದಾರೆ ಎಂದು ಈಗ ಮೇಕೆದಾಟು ಯೋಜನೆ ಬಗ್ಗೆ ಧ್ವನಿ ಎತ್ತುತ್ತಿದ್ದಾರೆ. ಕಾಂಗ್ರೆಸ್ ಸರಕಾರದಲ್ಲೇ ಮೇಕೆದಾಟು ಯೋಜನೆ ಆರಂಭಿಸಿ ಪೂರ್ಣಗೊಳಿಸುತ್ತೇವೆ. ಈ ಯೋಜನೆ ಜಾರಿ ಮಾಡಲೇಬೇಕು ಎಂದು ಜಲಸಂಪನ್ಮೂಲ ಇಲಾಖೆ ಜವಾಬ್ದಾರಿ ವಹಿಸಿಕೊಂಡಿದ್ದೇನೆ ಎಂದು ಡಿಕೆ ಶಿವಕುಮಾರ್ ತಿಳಿಸಿದರು.

ಅಜ್ಜಿ ಮೊಮ್ಮಗಳಿಗೆ ಉಚಿತ, ಲವ್‌ಬರ್ಡ್ಸ್‌ಗೆ ಟಿಕೆಟ್!

ಕೆಎಸ್‌ಆರ್‌ಟಿಸಿಯಲ್ಲಿ ಜನರಿಗೆ ಫ್ರೀ ಪ್ರಯಾಣ | ಪ್ರಾಣಿ-ಪಕ್ಷಿಗಳಿಗೆ 444 ರು. ಟಿಕೆಟ್

ಬೆಂಗಳೂರು: ಶಕ್ತಿ ಯೋಜನೆಯಡಿ ಅಜ್ಜಿ ಮತ್ತು ಮೊಮ್ಮಗಳಿಗೆ ಉಚಿತ ಪ್ರಯಾಣ. ಆದರೆ, ಅವರು ಕೊಂಡೊಯ್ಯುತ್ತಿದ್ದ ನಾಲ್ಕು ಲವ್ ಬರ್ಡ್ಸ್ (ಹಕ್ಕಿ)ಗಳಿಗೆ 444 ರು. ಮೊತ್ತದ ಟಿಕೆಟ್...!

ಅಚ್ಚರಿಯಾದರೂ ಇದು ನಿಜ. ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಬೆಂಗಳೂರಿನಿಂದ ಮೈಸೂರಿಗೆ ಪ್ರಯಾಣಿಸುತ್ತಿದ್ದ ಅಜ್ಜಿ ಹಾಗೂ ಮೊಮ್ಮಗಳಿಗೆ ಉಚಿತ ಟಿಕೆಟ್ ನೀಡಿ ಅವರೊಂದಿಗಿದ್ದ 4 ಲವ್ ಬರ್ಡ್ಸ್‌ಗಳಿಗೆ 444 ರು. ಟಿಕೆಟ್ ನೀಡಿರುವ ಘಟನೆ ಬುಧವಾರ ನಡೆದಿದೆ.

ಬುಧವಾರ ಬೆಳಗ್ಗೆ 8.18ಕ್ಕೆ ಬೆಂಗಳೂರಿನಿಂದ ಮೈಸೂರು ಹೊರಟ್ಟಿದ್ದ ಅಜ್ಜಿ ಮತ್ತು ಮೊಮ್ಮಗಳು ಬಸ್ ಹತ್ತಿ ಕುಳಿತಿದ್ದರು. ನಿರ್ವಾಹಕ ಬಂದೊಡನೆ ಆಧಾರ್ ಕಾರ್ಡ್ ತೋರಿಸಿ ಉಚಿತ ಟಿಕೆಟ್ ಪಡೆದಿದ್ದರು. ಆದರೆ ಅಜ್ಜಿ-ಮೊಮ್ಮಗಳ ಕೈಯಲ್ಲಿದ್ದ ಪಂಜರದಲ್ಲಿ 4 ಲವ್ ಬರ್ಡ್ ಗಮನಿಸಿದ ನಿರ್ವಾಹಕ ಒಂದು ಹಕ್ಕಿಗೆ 111 ರು.ನಂತೆ ನಾಲ್ಕು ಹಕ್ಕಿಗಳಿಗೆ 444 ರು. ಮೊತ್ತದ ಟಿಕೆಟ್ ನೀಡಿದ್ದಾರೆ. ಟಿಕೆಟ್‌ನಲ್ಲಿ ಆ ಹಕ್ಕಿಗಳನ್ನು ಮಕ್ಕಳು ಎಂದು ನಮೂದಿಸಲಾಗಿದೆ.

★ಬೆಂಗಳೂರಿನಿಂದ ಮೈಸೂರಿಗೆ ಪ್ರಯಾಣ
★ಟಿಕೆಟ್‌ನಲ್ಲಿ ಹಕ್ಕಿಗಳನ್ನು ಮಕ್ಕಳೆಂದು ನಮೂದು

ಇದರಿಂದಾಗಿ ಅಜ್ಜಿ ಮತ್ತು ಮೊಮ್ಮಗಳು ಉಚಿತವಾಗಿ ಪ್ರಯಾಣಿಸಿದರೂ ತಮ್ಮೊಂದಿಗೆ ನಾಲ್ಕು ಹಕ್ಕಿಗಳನ್ನು ಹಿಡಿದುಕೊಂಡಿದ್ದರಿಂದ 444 ರು. ವೆಚ್ಚ ಮಾಡಬೇಕಾದ ಅನಿವಾರ್ಯ ಪರಿಸ್ಥಿತಿ ಬಂದಿದೆ.

ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಕೆಎಸ್‌ಆರ್‌ಟಿಸಿ ಸಾಮಾನ್ಯ ಬಸ್‌ಗಳಲ್ಲಿ ಉಚಿತ ಪ್ರಯಾಣ ಸೌಲಭ್ಯವಿದೆ. ಆದರೆ, ಸಂಸ್ಥೆಯ ನಿಯಮಗಳ ಪ್ರಕಾರ ಪ್ರಯಾಣಿಕರು ತಮ್ಮೊಂದಿಗೆ ಬಸ್‌ನಲ್ಲಿ ಕರೆದೊಯ್ಯುವ ಪ್ರಾಣಿ ಅಥವಾ ಪಕ್ಷಿಗಳಿಗೆ ಅರ್ಧ ಟಿಕೆಟ್ ಖರೀದಿಸಬೇಕು. ಈ ರೀತಿ ಟಿಕೆಟ್ ಪಡೆಯದೇ ಇದ್ದರೆ ಪ್ರಯಾಣಿಕರಿಗೆ ದಂಡ ವಿಧಿಸಲಾಗುತ್ತದೆ. ಅಲ್ಲದೆ, ಟಿಕೆಟ್ ನೀಡದೇ ಇದ್ದ ನಿರ್ವಾಹಕನ ವಿರುದ್ಧವೂ ಕ್ರಮ ಕೈಗೊಳ್ಳಲಾಗುತ್ತದೆ. ಹೀಗಾಗಿ ಹಕ್ಕಿಗಳಿಗೆ ಟಿಕೆಟ್ ತೆಗೆದುಕೊಳ್ಳಬೇಕಾಗಿ ಬಂದಿತ್ತು.

ಸಾಹಿತಿ ಗುರುಲಿಂಗ ಕಾಪಸೆ ನಿಧನ

ಧಾರವಾಡ: ಸಾಹಿತಿ ಗುರುಲಿಂಗ ಕಾಪಸೆ (96) ಅವರು ಮಂಗಳವಾರ ತಡರಾತ್ರಿ ಧಾರವಾಡ ನಗರದ ನಿರ್ಮಲಾ ಆಸ್ಪತ್ರೆಯಲ್ಲಿ ನಿಧನರಾದರು. ನಗರದ ಸಪ್ತಾಪೂರದ ದುರ್ಗಾ ಕಾಲೋನಿಯ ಅವರ ಗೃಹದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.



ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಬಿ.ಕೆ.ಲೋಣಿಯಲ್ಲಿ 1928 ಏಪ್ರಿಲ್ 2ರಂದು ಗುರುಲಿಂಗ ಕಾಪಸೆ ಅವರು ಜನಿಸಿದ್ದರು.

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕ. ಹಲಸಂಗಿ ಗೆಳೆಯರು, ಅಕ್ಕಮಹಾದೇವಿ, ಅರವಿಂದರು, ಬಸವೇಶ್ವರ, ಶಾಲ್ಮಲೆಯಿಂದ ಗೋದಾವರಿಯವರೆಗೆ (ಪ್ರವಾಸ ಕಥನ) ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ವರದರಾಜ ಆದ್ಯ ಪ್ರಶಸ್ತಿ, ಆನಂದಕಂದ ಪ್ರಶಸ್ತಿ, ರಾಜ್ಯ ಸಾಹಿತ್ಯ ಅಕಾಡೆಮಿ ಗೌರವ ಪ್ರಶಸ್ತಿ ಮೊದಲಾದ ಪುರಸ್ಕಾರಗಳು ಸಂದಿವೆ. ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದರು.

25 ದಿನಗಳಲ್ಲಿ 3.13 ಕೋಟಿ ರು ಸಂಗ್ರಹ

ಚಾಮರಾಜನಗರ: ಜಿಲ್ಲೆಯ ಪ್ರಸಿದ್ಧ ಯಾತ್ರಾ ಸ್ಥಳ ಮಲೆ ಮಹದೇಶ್ವರ ಬೆಟ್ಟದ ಮಹದೇಶ್ವರ ದೇವಾಲಯದ ಹುಂಡಿಗಳಲ್ಲಿ 25 ದಿನಗಳಲ್ಲಿ ದಾಖಲೆಯ 3.13 ಕೋಟಿ ರು. ಸಂಗ್ರಹವಾಗಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ಮಾಹಿತಿ ನೀಡಿದೆ. ಮಲೆ ಮಹದೇಶ್ವರ ಬೆಟ್ಟದ ಇತಿಹಾಸದಲ್ಲೇ ತಿಂಗಳೊಂದರಲ್ಲಿ ಹುಂಡಿಗಳಿಂದ ಸಂಗ್ರಹವಾದ ಅತಿ ಹೆಚ್ಚಿನ ಮೊತ್ತ ಇದಾಗಿದೆ. ಇದುವರೆಗೆ ತಿಂಗಳೊಂದರಲ್ಲಿ 2.90 ಕೋಟಿ ರು. ಸಂಗ್ರಹವಾಗಿದ್ದು ದಾಖಲೆಯಾಗಿತ್ತು. ಮಾ.1 ರಿಂದ 25ನೇ ತಾರೀಕಿನವರೆಗೆ ಹುಂಡಿಗಳಲ್ಲಿ ಸಂಗ್ರಹವಾದ ಹಣದ ಎಣಿಕೆ ಮಂಗಳವಾರ ನಡೆಯಿತು. ಬೆಳಗ್ಗೆ 7ಕ್ಕೆ ಆರಂಭವಾದ ಹುಂಡಿಗಳ ಎಣಿಕೆ ಕಾರ್ಯ ತಡರಾತ್ರಿ 10.40ಕ್ಕೆ ಪೂರ್ಣಗೊಂಡಿತು. ಒಟ್ಟು 3,13,00,931 ರು. ಹುಂಡಿಗಳಲ್ಲಿ ಸಂಗ್ರಹವಾಗಿದೆ. 2,98,41,802 ರು.ನೋಟುಗಳ ಮೂಲಕ ಹಾಗೂ 14,59,129 ರು.ನಾಣ್ಯಗಳ ಮೂಲಕ ಸಂಗ್ರಹವಾಗಿದೆ. ಇದಲ್ಲದೇ 47 ಗ್ರಾಂ ಚಿನ್ನ, 2 ಕೆಜಿ 300 ಗ್ರಾಂ ಬೆಳ್ಳಿ ಸಂಗ್ರಹವಾಗಿದೆ. 2 ಅಮೆರಿಕನ್ ಡಾರ್ಲ, 1 ಬಾಂಗ್ಲಾದೇಶದ ನೋಟು, ನೇಪಾಳ ದೇಶದ 2 ನೋಟು, ಮಲೇಶಿಯಾದ 1 ನೋಟುಗಳು ದೊರೆತಿವೆ.



ರಾಜ್ಯಕ್ಕೆ ವಿದ್ಯುತ್ ಬರ ಇಲ್ಲ: ಕೆ.ಜೆ.ಜಾರ್ಜ್

ಲೋಡ್ ಶೆಡ್ಡಿಂಗ್ ಬಗ್ಗೆ ಎಚ್ಚರ | ಬೇಸಿಗೆಯಲ್ಲಿ ವಿದ್ಯುತ್ ಸಮರ್ಪಕ ಪೂರೈಕೆಗೆ ಸಜ್ಜು

ಬೆಂಗಳೂರು: ಬೇಸಿಗೆಯಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ನಮ್ಮ ಸರಕಾರದ ಆದ್ಯತೆಯಾಗಿದ್ದು, ಅದಕ್ಕೆ ಎಲ್ಲಾ ರೀತಿಯ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿ, ಸದ್ಯ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಬಿಕ್ಕಟ್ಟಿಲ್ಲ. ಜನರಿಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದು. ಬೇಸಿಗೆಯಲ್ಲಿ ವಿದ್ಯುತ್ ಬೇಡಿಕೆ ಹೆಚ್ಚುವುದು ನಿರೀಕ್ಷಿತ. ಅದಕ್ಕಾಗಿಯೇ ಬಹಳ ಮುಂಚಿತವಾಗಿ ಸರಿಯಾದ ಪರಿಹಾರ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ರಾಜ್ಯದ ಯಾವುದೇ ವರ್ಗದ ಗ್ರಾಹಕರಿಗೆ ಲೋಡ್ ಶೆಡ್ಡಿಂಗ್ ಬಿಸಿ ತಟ್ಟದಂತೆ ಇಲಾಖೆ ಎಚ್ಚರ ವಹಿಸಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಪ್ರತಿ ದಿನದ ವಿದ್ಯುತ್ ಬಳಕೆ 329 ಮಿಲಿಯನ್ ಯೂನಿಟ್‌ನಷ್ಟಿದ್ದು, ಹಿಂದಿನ ವರ್ಷ ಇದೇ ಅವಧಿಯಲ್ಲಿ ವಿದ್ಯುತ್ ಬಳಕೆ ಪ್ರಮಾಣ 300 ಮಿ.ಯೂ.ನಷ್ಟಿತ್ತು. ಕಳೆದ ವರ್ಷ ಗರಿಷ್ಠ ಲೋಡ್ 15,300 ಮೆ.ವ್ಯಾ. ಆಗಿದ್ದರೆ, ಈ ವರ್ಷದ ಗರಿಷ್ಠ ಲೋಡ್ 17,000 ಮೆ.ವ್ಯಾ.ಗೂ ಹೆಚ್ಚು ಏರಿಕೆಯಾಗಿದೆ. ಪರೀಕ್ಷೆಯ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಓದಲು ತೊಂದರೆಯಾಗದಂತೆ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ. ಈಗಾಗಲೇ ಕೃಷಿ ಪಂಪ್ ಸೆಟ್‌ಗಳಿಗೆ 7 ತಾಸು ವಿದ್ಯುತ್ ಪೂರೈಕೆಗೆ ಆದೇಶ ನೀಡಲಾಗಿದೆ. ಬೇಸಿಗೆ ಕಾರಣದಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಮಾಹಾತಿ ನೀಡಿದ್ದಾರೆ.

ವಿದ್ಯುತ್ ಪೂರೈಕೆಗೆ ಕೈಗೊಂಡಿರುವ ಕ್ರಮಗಳು

- ಬೇಡಿಕೆಗೆ ಅನುಗುಣವಾಗಿ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ವಿದ್ಯುತ್ ಉತ್ಪಾದನೆಗೆ ಒತ್ತು
- ರಾಜ್ಯದ 3 ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಲ್ಲಿ ಪ್ರಸ್ತುತ 3,250 ಮೆ.ವ್ಯಾ. ವಿದ್ಯುತ್ ಉತ್ಪಾದನೆ
- ಉತ್ತರ ಪ್ರದೇಶ, ಪಂಜಾಬ್ ಜತೆಗೆ ವಿದ್ಯುತ್ ದ್ವಿಪಕ್ಷೀಯ ವಿನಿಮಯ ಒಪ್ಪಂದ. (ಪ್ರತಿದಿನ ಸರಾಸರಿ 900 ಮೆ.ವ್ಯಾ. ವಿದ್ಯುತ್ ಆಮದು)
- ವಿದ್ಯುತ್ ಕಾಯಿದೆಯ ಸೆಕ್ಷನ್ 11 ಜಾರಿಗೊಳಿಸಿ, ಖಾಸಗಿ ವಿದ್ಯುತ್ ಉತ್ಪಾದಕರಿಂದ ವಿದ್ಯುತ್ ಖರೀದಿ
- ಸೌರ ಮತ್ತು ಪವನ ವಿದ್ಯುತ್ ಸ್ಥಾವರಗಳಿಂದ (ಖಾಸಗಿ ವಲಯ) ಉತ್ಪಾದನೆ ಆಗುವ ವಿದ್ಯುತ್ ರಾಜ್ಯಕ್ಕೆ ಲಭ್ಯ
- ರಾಜ್ಯಕ್ಕೆ ಹೆಚ್ಚುವರಿ ವಿದ್ಯುತ್ತಿನ ಅಗತ್ಯದಿಂದ ಕೇಂದ್ರ ಗ್ರಿಡ್‌ನಿಂದ ಈ ವರ್ಷವೂ (302 ಮೆ.ವ್ಯಾ.) ವಿದ್ಯುತ್ ಪಡೆಯಲಾಗಿದೆ.
- ಅನಿರೀಕ್ಷಿತ ವಿದ್ಯುತ್ ಬೇಡಿಕೆಯನ್ನು ಪೂರೈಸಲು, ಕೇಂದ್ರ ಸರಕಾರವು ನಿಗದಿಪಡಿಸಿರುವ ವಿದ್ಯುತ್ ವಿನಿಮಯ ಕೇಂದ್ರದ ಮೂಲಕ ಖರೀದಿ
- 370 ಮೆ.ವ್ಯಾ.ಸಾಮರ್ಥ್ಯದ ಯಲಹಂಕ ಅನಿಲ ಸ್ಥಾವರದಲ್ಲಿ ಶೀಘ್ರದಲ್ಲೇ ಉತ್ಪಾದನೆ ಆರಂಭವಾಗಲಿದೆ.
- ವಿದ್ಯುತ್ ಸರಬರಾಜು ಮೇಲ್ವಿಚಾರಣೆಗೆ ಪ್ರತಿ ಜಿಲ್ಲೆಗೆ ಮುಖ್ಯ ಎಂಜಿನಿಯರ್ ಶ್ರೇಣಿಯ ಅಧಿಕಾರಿಗಳ ನೇಮಕ